# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜೀವ್ ಗಾಂಧಿ ರಾಷ್ಟ್ರೀಯ ಕುಡಿಯುವ ನೀರಿನ ನಿಯೋಗ - ಕೇಂದ್ರ ಪುರಸ್ಕೃತ ತ್ವರಿತ ಗ್ರಾಮೀಣ ನೀರು ಸರಬರಾಜು-ಸಾಮಾನ್ಯ ಕಾರ್ಯಕ್ರಮದಡಿ 2008-09ನೇ ಸಾಲಿನಲ್ಲಿ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ನಿರ್ವಹಣೆ ಮತ್ತು ಯೋಜನೆಗಳಿಗಾಗಿ 1ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ದಿ ಸಚಿವಾಲಯ-ಕುಡಿಯುವ ನೀರು ಸರಬರಾಜು ಇಲಾಖೆ- ರಾಜೀವ್ ಗಾಂಧಿ ರಾಷ್ಟ್ರೀಯ ಕುಡಿಯುವ ನೀರಿನ ನಿಯೋಗದ ಮಂಜೂರಾತಿ ಆದೇಶ ಸಂ:W-11020/13/2008/ARWSP/DWS-I ದಿ:01.04.2008 .

\- - -

**ಪೀಠಿಕೆ:**

ಮೇಲೆ ಓದಲಾದ ಮಂಜೂರಾತಿ ಆದೇಶದಲ್ಲಿ ಕೇಂದ್ರ ಸರ್ಕಾರವು 2008-09ನೇ ಸಾಲಿಗೆ ತ್ವರಿತ ಗ್ರಾಮೀಣ ನೀರು ಸರಬರಾಜು ಸಾಮಾನ್ಯ ಕಾರ್ಯಕ್ರಮದಡಿ-ಗ್ರಾಮೀಣ ಜನವಸತಿಗಳಿಗೆ ಕುಡಿಯುವ ನೀರಿನ ಪೂರೈಕೆಗಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು/ಪೂರ್ಣಗೊಳಿಸಲು ರಾಜ್ಯಕ್ಕೆ ರೂ.4095.39 ಲಕ್ಷ ಅನುದಾನವನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಿದೆ. ಸದರಿ ಅನುದಾನ ರಾಜ್ಯ ಸರ್ಕಾರದ ಲೆಕ್ಕಕ್ಕೆ ಜಮೆಯಾಗಿರುವುದಾಗಿ ಆರ್ಥಿಕ ಇಲಾಖೆ ದಿ:27.5.2008ರಂದು ಖಾತ್ರಿ ಪಡಿಸಿದೆ. ಈ ಪೈಕಿ ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನಕ್ಕಾಗಿ ರೂ.3276.31 ಲಕ್ಷ ಮತ್ತು ನಿರ್ವಹಣೆಗಾಗಿ ರೂ.614.31 ಲಕ್ಷಗಳಂತೆ ಒಟ್ಟು ರೂ.3890.62 ಲಕ್ಷಗಳನ್ನು ರಾಜ್ಯದ 29 ಜಿಲ್ಲಾ ಪಂಚಾಯತ್‌ಗಳ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಬಿಡುಗಡೆ ಮಾಡಬೇಕಾಗಿದೆ. ಆದ್ದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 32 ಗ್ರಾನೀಸ (2) 08 ಬೆಂಗಳೂರು, ದಿನಾಂಕ:31.05.2008

ಕೇಂದ್ರ ಪುರಸ್ಕೃತ ತ್ವರಿತ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮದಡಿ ಈ ಮೂಲಕ **ರೂ.3276.31 ಲಕ್ಷ** (ಮೂರು ಸಾವಿರದ ಇನ್ನೂರ ಎಪ್ಪತ್ತಾರು ಲಕ್ಷದ ಮೂವತ್ತೊಂದು ಸಾವಿರ ರೂಪಾಯಿಗಳು ಮಾತ್ರ) ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನಕ್ಕಾಗಿ ಹಾಗೂ **ರೂ.614.31 ಲಕ್ಷ** (ಆರು ನೂರ ಹದಿನಾಲ್ಕು ಲಕ್ಷದ ಮೂವತ್ತೊಂದು ಸಾವಿರ ರೂಪಾಯಿಗಳು ಮಾತ್ರ) ನೀರು ಸರಬರಾಜು ಕಾರ್ಯಕ್ರಮದ ನಿರ್ವಹಣೆಗಾಗಿ **ಒಟ್ಟು ರೂ.3890.62 ಲಕ್ಷಗಳನ್ನು** (ಮೂರು ಸಾವಿರದ ಎಂಟು ನೂರ ತೊಂಭತ್ತು ಲಕ್ಷದ ಅರವತ್ತೆರಡು ಸಾವಿರ ರೂಪಾಯಿಗಳು ಮಾತ್ರ) ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧ-1 ರಲ್ಲಿ** ತೋರಿಸಿರುವಂತೆ ಕೇಂದ್ರ ಸರ್ಕಾರದ ಮಂಜೂರಾತಿ ಆದೇಶದ ನಿಬಂಧನೆಗೊಳಪಟ್ಟು ರಾಜ್ಯದ ಎಲ್ಲಾ 29 ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು ಈ ಆದೇಶದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸರ್ಕಾರದ ಆದೇಶ ಸಂ:FD-07/ZPA/2003 ದಿ:14.7.2005ರನ್ವಯ ಖಜಾನೆಯಿಂದ ಪಡೆದು ಉದ್ದೇಶಿತ ಯೋಜನೆಗಳ ಅನುಷ್ಠಾನ ಸಲುವಾಗಿ ಆಯಾ ಯೋಜನಾ ಮಾರ್ಗದರ್ಶಿಗಳನ್ವಯ ವೆಚ್ಚ ಭರಿಸತಕ್ಕದ್ದು.

3. ಸದರಿ ಅನುದಾನವನ್ನು ಅನುಮೋದಿತ ಮುಂದುವರಿದ ಕಾಮಗಾರಿಗಳಿಗೆ ಬಳಸಬಹುದು. ಈಗಾಗಲೇ ಪತ್ರ ಸಂಖ್ಯೆ ಗ್ರಾಅಪ 45 ಗ್ರಾನೀಸ(4)08 ದಿನಾಂಕ:26-5-2008ರಲ್ಲಿ ನೀಡಿರುವ ಸೂಚನೆಯಂತೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಸರ್ಕಾರದ ಅನುಮೋದನೆ ಪಡೆದು ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ವಿನಿಯೋಗಿಸತಕ್ಕದ್ದು.

4. ನೀರು ಸರಬರಾಜು ಯೋಜನೆಗಳ **ನಿರ್ವಹಣೆಗಾಗಿ ಬಿಡುಗಡೆ** ಮಾಡಿದ ಅನುದಾನವನ್ನು ಸಂಬಂಧಿಸಿದ **ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆ ಮಾಡತಕ್ಕದ್ದು.** ಹಣ ಬಿಡುಗಡೆ ಆದೇಶ ಮತ್ತು ವಿನಿಯೋಗದ ವರದಿಯನ್ನು ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರಿಗೆ ಮಾಹಿತಿಗಾಗಿ ಸಲ್ಲಿಸುವುದು. ಮುಖ್ಯ ಅಭಿಯಂತರರು ಜಿಲ್ಲಾವಾರು ಕ್ರೋಢೀಕೃತ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಏರ್ಪಾಡು ಮಾಡುವುದು.

5. ಕಾಮಗಾರಿವಾರು ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-20 ಇವರಿಗೆ ಹಾಗೂ ಸರ್ಕಾರಕ್ಕೆ ಇಮೇಲ್ ಮುಖೇನ ಸಲ್ಲಿಸುವುದು.

6. ಪಂಚಾಯತ್ ರಾಜ್ ಸಂಸ್ಥೆಗಳು ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನ ವೆಚ್ಚವನ್ನು ಲೆಕ್ಕಶೀರ್ಷಿಕೆ 4215-ನೀರು ಸರಬರಾಜು ಮತ್ತು ನೈರ್ಮಲ್ಯ ಮೇಲಣ ಬಂಡವಾಳ ವೆಚ್ಚ -01-ನೀರು ಸರಬರಾಜು-102 - ಗ್ರಾಮೀಣ ನೀರು ಸರಬರಾಜು-9- ಟೆಸ್ಟ್ - 04 - ಟೆಸ್ಟ್ ಗ್ರಾಮೀಣ ನೀರು ಸರಬರಾಜು - 132 - ಬಂಡವಾಳ ವೆಚ್ಚಗಳು (ಯೋಜನೆ) (ARWSP) 2008-09ರಡಿ ಭರಿಸತಕ್ಕದ್ದು. (4215-01-102-9-04-132) **ಹಾಗೂ** ಗ್ರಾಮೀಣ ನೀರು ಸರಬರಾಜು ಯೋಜನೆಗಳ ನಿರ್ವಹಣೆ ವೆಚ್ಚವನ್ನು ಲೆಕ್ಕಶೀರ್ಷಿಕೆ 2215-ನೀರು ಸರಬರಾಜು ಮತ್ತು ನೈರ್ಮಲ್ಯ-01-ಬ್ಲಾಕ್ ಅನುದಾನ-198- ಗ್ರಾಮ ಪಂಚಾಯತ್‌ಗಳಿಗೆ ಸಹಾಯ-7-ಗ್ರಾಮ ಪಂಚಾಯತ್‌ಗಳು-02-ತ್ವರಿತ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮ (ಯೋಜನೆ) (ARWSP) 2008-09ರಡಿ ಭರಿಸತಕ್ಕದ್ದು. (2215-01-198-7-02)

7. ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಟಿಪ್ಪಣಿ ಸಂ:ಗ್ರಾಅಪ/230/ಪಿಬಿಎಸ್/2008 ದಿ:26.5.08ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ:ಎನ್.ಮಂಜುಳ)
ನಿರ್ದೇಶಕರು (ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಚೇರಿ, ಕಾಲೇಜು ರಸ್ತೆ, ಧಾರವಾಡ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ,ಅಭಯ ಸಂಕೀರ್ಣ, 4ನೇ ಮಹಡಿ, ನಂ.55, ರೆಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
11. ಎಲ್ಲಾ ಜಿಲ್ಲಾಪಂಚಾಯತ್‌ಗಳ ಅಧ್ಯಕ್ಷರು.
12. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
13. ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
14. ರಾಜ್ಯದ ಎಲ್ಲಾ (8) ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರುಗಳು.
15. ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
18. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
20. ಸಹ ನಿರ್ದೇಶಕರು,ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ,ಲಲಿತ್ ಮಹಲ್ ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
22. ಆಯುಕ್ತರು, KRWSSA & ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ/ನಿರ್ದೇಶಕರು (ಗ್ರಾಮೂಸೌ) ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ " ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) /
26. ಗ್ರಾಅಪ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) / 27. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.